# ಕರ್ನಾಟಕ ಸರ್ಕಾರದ ನಡವಳಿಗಳು

ವಿಷಯ : **2019-20ನೇ ಸಾಲಿನಲ್ಲಿ ನವ ರಾಷ್ಟ್ರೀಯ ಜೈವಿಕ ಅನಿಲ ಮತ್ತು ಸಾವಯವ ಗೊಬ್ಬರ ಕಾರ್ಯಕ್ರಮ (NNBOMP)ಕ್ಕೆ ಸಂಬಂಧಿಸಿದಂತೆ ಪೂರಕವಾಗಿ ರಾಜ್ಯ ಸಹಾಯಧನ ಬಿಡುಗಡೆ ಮಾಡುವ ಕುರಿತು.**

ಓದಲಾಗಿದೆ :
1. ಕೇಂದ್ರ ಸರ್ಕಾರದ E-File No.251/2/2018-Biogas, ದಿನಾಂಕ 14.05.2019.
2. ಸರ್ಕಾರದ ಪತ್ರ ಸಂಖ್ಯೆ: ಗ್ರಾಅಪ 25 ಜೈಅಯೋ 2019 ದಿನಾಂಕ 27.05.2019
3. ಮುಖ್ಯ ಕಾರ್ಯನಿರ್ವಾಹಕ ಅಧಿಕಾರಿ, ಜಿಲ್ಲಾ ಪಂಚಾಯತ್, ಹಾಸನ ರವರ ಪತ್ರ ದಿನಾಂಕ 03.04.2019
4. ಮುಖ್ಯ ಕಾರ್ಯನಿರ್ವಾಹಕ ಅಧಿಕಾರಿ, ಜಿಲ್ಲಾ ಪಂಚಾಯತ್, ಉಡುಪಿ ರವರ ಪತ್ರ ದಿನಾಂಕ 23.05.2019.
5. ಮುಖ್ಯ ಕಾರ್ಯನಿರ್ವಾಹಕ ಅಧಿಕಾರಿ, ಜಿಲ್ಲಾ ಪಂಚಾಯತ್, ದಕ್ಷಿಣ ಕನ್ನಡ ರವರ ಪತ್ರ ದಿನಾಂಕ 16.05.2019.

## ಪ್ರಸ್ತಾವನೆ :

**2019-20**ನೇ ಸಾಲಿನಲ್ಲಿ ನವ ರಾಷ್ಟ್ರೀಯ ಜೈವಿಕ ಅನಿಲ ಮತ್ತು ಸಾವಯವ ಗೊಬ್ಬರ (NNBOMP) ಕಾರ್ಯಕ್ರಮದ ಅನುಷ್ಠಾನಕ್ಕಾಗಿ ರಾಜ್ಯ ಆಯವ್ಯಯದ **ಲೆಕ್ಕ ಶೀರ್ಷಿಕೆ 2810-60-196-6-01(Lumpsum)**ರಡಿ **ರೂ.515.00**ಲಕ್ಷಗಳನ್ನು ರಾಜ್ಯ ಸಹಾಯಧನವನ್ನಾಗಿ ಬಿಡುಗಡೆ ಮಾಡಲು ನಿಗದಿಪಡಿಸಿದೆ.

ಮೇಲೆ (1)ರಲ್ಲಿ ಓದಲಾದಂತೆ ನವ ಮತ್ತು ನವೀಕರಿಸಬಹುದಾದ ಇಂಧನ ಮೂಲಗಳ ಮಂತ್ರಾಲಯ, ನವದೆಹಲಿ, **2019-20**ನೇ ಸಾಲಿಗೆ ಸಂಬಂಧಿಸಿದಂತೆ ಕಾರ್ಯಕ್ರಮದಡಿ ರಾಜ್ಯಕ್ಕೆ 7000 ಜೈವಾನಿಲ ಸ್ಥಾವರಗಳ ಭೌತಿಕ ಗುರಿ ಹಂಚಿಕೆ ಮಾಡಿದೆ. ಈ ರೀತಿ ಕೇಂದ್ರ ಸರ್ಕಾರವು ಹಂಚಿಕೆ ಮಾಡಿದ ಭೌತಿಕ ಗುರಿಯನ್ನು ಮೇಲೆ ಓದಲಾದ (2)ರಲ್ಲಿ ಜಿಲ್ಲೆಗಳಿಗೆ ಮರು ಹಂಚಿಕೆ ಮಾಡಿದೆ.

**2019-20**ನೇ ಸಾಲಿಗೆ ಸಂಬಂಧಿಸಿದಂತೆ ರಾಜ್ಯ ಆಯವ್ಯಯದ ಲೆಕ್ಕ ಶೀರ್ಷಿಕೆ **2810-60-196-6-01(Lumpsum)**ರಡಿ ನಿಗದಿಪಡಿಸಿದ **ರೂ.515.00ಲಕ್ಷಗಳಲ್ಲಿ 2018-19ನೇ** ಸಾಲಿನಲ್ಲಿ ನಿರ್ಮಿಸಲಾದ ಅನಿಲ ಸ್ಥಾವರಗಳ ಬಾಕಿ ಪಾವತಿಗಾಗಿ ರಾಜ್ಯ ಸಹಾಯಧನ **ರೂ.21.07**ಲಕ್ಷ ಹಾಗೂ **2019-20**ನೇ ಸಾಲಿನಲ್ಲಿ ಪ್ರಗತಿ ಸಾಧಿಸುವ ಜಿಲ್ಲಾ ಪಂಚಾಯತ್‌ಗಳಿಗೆ **ರೂ.107.68**ಲಕ್ಷ ಒಟ್ಟಾರೆ ಸೇರಿದಂತೆ **ರೂ.128.75** ಲಕ್ಷಗಳನ್ನು ಮೊದಲನೇ ಕಂತಿನ ಅನುದಾನವನ್ನಾಗಿ ಸಂಬಂಧಿಸಿದ ಜಿಲ್ಲಾ ಪಂಚಾಯತ್‌ಗಳಿಗೆ ಬಿಡುಗಡೆ ಮಾಡಲು ಸರ್ಕಾರ ತೀರ್ಮಾನಿಸಿದೆ. ಪ್ರಯುಕ್ತ ಈ ಆದೇಶ.

## ಸರ್ಕಾರದ ಆದೇಶ ಸಂಖ್ಯೆ:ಗ್ರಾಅಪ/01/ಆರ್‌ಇಪಿ/2019, ಬೆಂಗಳೂರು, ದಿನಾಂಕ 09.08.2019

ಪ್ರಸ್ತಾವನೆಯಲ್ಲಿ ವಿವರಿಸಲಾದಂತೆ, ಕಾರ್ಯಕ್ರಮದಡಿ NNBOMPರಡಿ ಹಂಚಿಕೆ ಮಾಡಿದ ಭೌತಿಕ ಗುರಿಯನ್ವಯ ಪ್ರಗತಿ ಸಾಧಿಸುವ ಕೆಳಕಂಡ ಜಿಲ್ಲಾ ಪಂಚಾಯತ್‌ಗಳಿಗೆ ಮೊದಲನೇ ಕಂತಿನ ಅನುದಾನ **ರೂ.128.75**ಲಕ್ಷ**(ಒಂದು ನೂರಾ ಇಪ್ಪತ್ತೆಂಟು ಲಕ್ಷದ ಎಪ್ಪತ್ತೈದು ಸಾವಿರ ರೂಪಾಯಿಗಳು ಮಾತ್ರ)**ಗಳನ್ನು ರಾಜ್ಯ ಸಹಾಯಧನವನ್ನಾಗಿ ಬಿಡುಗಡೆ ಮಾಡಿ ಆದೇಶಿಸಿದೆ.

(ರೂ.ಲಕ್ಷಗಳಲ್ಲಿ)

| ಕ್ರಸಂ | ಜಿಲ್ಲೆಯ ಹೆಸರು | ಬಿಡುಗಡೆ ಮಾಡಿದ ಅನುದಾನ |
|---|---|---|
| | | 2019-20 |
| 1 | ಬೆಂಗಳೂರು (ಗ್ರಾ) | 15.00 |
| 2 | ಚಿಕ್ಕಬಳ್ಳಾಪುರ | 13.48 |
| 3 | ಚಿಕ್ಕಮಗಳೂರು | 15.00 |
| 4 | ಕಲಬುರಗಿ | 24.00 |
| 5 | ಉತ್ತರ ಕನ್ನಡ | 12.00 |
| 6 | ವಿಜಯಪುರ | 13.20 |
| 7 | ಯಾದಗಿರಿ | 15.00 |
| | ಒಟ್ಟು | **107.68** |
| | | **2018-19** |
| 8 | ಹಾಸನ | 4.60 |
| 9 | ಉಡುಪಿ | 7.20 |
| 10 | ದಕ್ಷಿಣ ಕನ್ನಡ | 9.27 |
| | ಒಟ್ಟು | **21.07** |
| | ಒಟ್ಟು ಮೊತ್ತ | **128.75** |

ಹಾಲಿ ಬಿಡುಗಡೆ ಮಾಡುತ್ತಿರುವ ಅನುದಾನವನ್ನು ಮಹಾಲೇಖಪಾಲರ ಲೆಕ್ಕ ತಪಾಸಣೆಗೊಳಪಟ್ಟು ಬಿಡುಗಡೆ ಮಾಡಲಾಗುತ್ತಿದ್ದು, ಕಾರ್ಯಕ್ರಮದ ಮಾರ್ಗಸೂಚಿಯನ್ವಯ ಪರಿಶೀಲಿಸಿ, ಉದ್ದೇಶಿತ ಕಾರ್ಯಕ್ರಮಕ್ಕಾಗಿ ಮಾತ್ರ ವಿನಿಯೋಗಿಸತಕ್ಕದ್ದು. ಯಾವುದೇ ಕಾರಣಕ್ಕೂ ಅನುದಾನವನ್ನು ಮಾರ್ಗಪಲ್ಲಟ ಹಾಗೂ ವ್ಯಪಗತ ಮಾಡತಕ್ಕದಲ್ಲ. **ಪ್ರಸ್ತುತ ಬಿಡುಗಡೆ ಮಾಡುತ್ತಿರುವ ಸದರಿ ಅನುದಾನವನ್ನು ಗಾಂಧಿ ಸಾಕ್ಷಿ ಕಾಯಕದಡಿ ಇಂಧೀಕರಿಸಿ ಬಿಡುಗಡೆ ಮಾಡತಕ್ಕದ್ದು.**

ಹಾಲಿ ಬಿಡುಗಡೆ ಮಾಡುತ್ತಿರುವ ಅನುದಾನವನ್ನು ಲೆಕ್ಕ ಶೀರ್ಷಿಕೆ **2810-60-196-6-01(Lumpsum)**ರಡಿ ವೆಚ್ಚ ಭರಿಸಿ, ನಿಗದಿತ ನಮೂನೆಯಲ್ಲಿ ಹಣಬಳಕೆ ಪ್ರಮಾಣ ಪತ್ರವನ್ನು ಸರ್ಕಾರಕ್ಕೆ ನೀಡುವುದು.

ಈ ಆದೇಶವನ್ನು ಆರ್ಥಿಕ ಇಲಾಖೆಯ ಆದೇಶ ಸಂಖ್ಯೆ: ಎಫ್‌ಡಿ 01 ಟಿಎಫ್‌ಪಿ 2019, ದಿನಾಂಕ 03.04.2019ರನ್ವಯ ಇಲಾಖಾ ಕಾರ್ಯದರ್ಶಿಗಳಿಗೆ ಪ್ರತ್ಯಾಯೋಜಿಸಿರುವ ಅಧಿಕಾರದಡಿ ಇಲಾಖಾ ಅಂತರಿಕ ಆರ್ಥಿಕ ಸಲಹೆಗಾರರ ಸಹಮತಿ ದಿನಾಂಕ 29.06.2019ರಲ್ಲಿ ಸಹಮತಿಯನ್ನು ಪಡೆದು ಹೊರಡಿಸಿದೆ.

ಕರ್ನಾಟಕ ರಾಜ್ಯಪಾಲರ ಆದೇಶಾನುಸಾರ
ಮತ್ತು ಅವರ ಹೆಸರಿನಲ್ಲಿ

(ಕೆ. ರೇವಣಪ್ಪ)
ನಿರ್ದೇಶಕರು (ಗ್ರಾಮೂಸೌ-2) ಹಾಗೂ
ಪದನಿಮಿತ್ತ ಸರ್ಕಾರದ ಉಪ ಕಾರ್ಯದರ್ಶಿ,
ಗ್ರಾಮೀಣಾಭಿವೃದ್ಧಿ ಮತ್ತು ಪಂಚಾಯತ್ ರಾಜ್ ಇಲಾಖೆ

ಇವರಿಗೆ,

1. ಮಹಾಲೇಖಪಾಲರು, ಕರ್ನಾಟಕ, ಬೆಂಗಳೂರು.
2. ಮುಖ್ಯ ಕಾರ್ಯನಿರ್ವಾಹಕ ಅಧಿಕಾರಿಗಳು, ಜಿಲ್ಲಾ ಪಂಚಾಯತ್, ಬೆಂಗಳೂರು(ಗ್ರಾ), ಚಿಕ್ಕಬಳ್ಳಾಪುರ, ಚಿಕ್ಕಮಗಳೂರು, ಕಲಬುರಗಿ, ಉತ್ತರ ಕನ್ನಡ, ವಿಜಯಪುರ, ಯಾದಗಿರಿ, ಹಾಸನ, ಉಡುಪಿ ಮತ್ತು ದಕ್ಷಿಣ ಕನ್ನಡ.
3. ಇಲಾಖಾ ಗಣಕ ಕೋಶ, ಗ್ರಾಮೀಣಾಭಿವೃದ್ಧಿ ಮತ್ತು ಪಂಚಾಯತ್ ರಾಜ್ ಇಲಾಖೆ.

ಪ್ರತಿಯನ್ನು :

1. ಸರ್ಕಾರದ ಪ್ರಧಾನ ಕಾರ್ಯದರ್ಶಿಗಳು/ಸರ್ಕಾರದ ಕಾರ್ಯದರ್ಶಿಗಳು (ಪಂ.ರಾ) ರವರ ಆಪ್ತ ಕಾರ್ಯದರ್ಶಿಗಳು, ಗ್ರಾಮೀಣಾಭಿವೃದ್ಧಿ ಮತ್ತು ಪಂಚಾಯತ್ ರಾಜ್ ಇಲಾಖೆ.
2. ಅಂತರಿಕ ಆರ್ಥಿಕ ಸಲಹೆಗಾರರು, ಗ್ರಾಮೀಣಾಭಿವೃದ್ಧಿ ಮತ್ತು ಪಂಚಾಯತ್ ರಾಜ್ ಇಲಾಖೆ.
3. ರಕ್ಷಾ ಕಡತಕ್ಕೆ / ಹೆಚ್ಚುವರಿ ಪ್ರತಿಗಳು.